ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 26/6/2020


# ಲಾಕ್‌ಡೌನ್‌ಗೆ ಸರ್ಕಾರದ ಅಂಕುಶ

ಸಂ.ಕ ಸಮಾಚಾರ ಬೆಂಗಳೂರು

ಎಸ್ಸೆಸ್ಸೆಲ್ಸಿ ಪರೀಕ್ಷೆ ಮುಗಿಯುವವರೆಗೂ ಯಾವುದೇ ಲಾಕ್‌ಡೌನ್ ಮಾಡದಿರಲು ನಿರ್ಧಾರ ಕೈಗೊಂಡಿರುವ ರಾಜ್ಯ ಸರ್ಕಾರವು ಲಾಕ್‌ಡೌನ್ ಬಗ್ಗೆ ಗೊಂದಲಕಾರಿ ಹೇಳಿಕೆ ನೀಡದಂತೆ ಸಚಿವರುಗಳಿಗೆ ತಾಕೀತು ಮಾಡಿದೆ.

ಲಾಕ್‌ಡೌನ್ ಜಾರಿಗೊಳಿಸುವ ಬಗ್ಗೆ ಸಚಿವರಾದ ಶ್ರೀರಾಮುಲು, ಆರ್.ಅಶೋಕ್, ಸಿಟಿ ರವಿ, ಡಾ. ಸುಧಾಕರ್ ಸೇರಿದಂತೆ ಹಲವರು ತರಹೇವಾರಿ ಹೇಳಿಕೆ ನೀಡಿದ್ದರು. ಇದರಿಂದ ಜನರಲ್ಲಿ ಗೊಂದಲ ಸೃಷ್ಟಿಯಾಗಿತ್ತು. ಇದಲ್ಲದೆಯೇ ಸಚಿವ ಸಂಪುಟ ಸಭೆಯಲ್ಲಿ ಲಾಕ್‌ಡೌನ್ ಬಗ್ಗೆ ನಿರ್ಧಾರ ಪ್ರಕಟಿಸಲಾಗುವುದು ಎಂದು ಹೇಳಿದ್ದರು. ಈ ರೀತಿಯ ಗೊಂದಲಕಾರಿ ಹೇಳಿಕೆಗಳಿಂದ ವಿಶೇಷವಾಗಿ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳು ಮತ್ತು ಪೋಷಕರು ಅನಗತ್ಯವಾಗಿ ಆತಂಕಕ್ಕೀಡಾಗಿದ್ದರು.



ಸಂಪುಟ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಮುಖ್ಯಮಂತ್ರಿ ಯಡಿಯೂರಪ್ಪ ಸದ್ಯಕ್ಕೆ ಯಾವುದೇ ರೀತಿಯ ಲಾಕ್‌ಡೌನ್ ಜಾರಿ ಇಲ್ಲ. ಅಂತಹ ಸಂಭವವೂ ಇಲ್ಲ. ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ನಡೆಯುತ್ತಿರುವ ಸಂದರ್ಭದಲ್ಲಿ ಅನಗತ್ಯ ಹೇಳಿಕೆ ನೀಡುವ ಮೂಲಕ ಗೊಂದಲ ಸೃಷ್ಟಿಸಿದ್ದೀರಿ ಎಂದು ಸಚಿವರುಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.




ಕೊರೊನಾ ಹತೋಟಿಗೆ ರಾಜ್ಯ ಸರ್ಕಾರ ಕ್ರಮ ಜರುಗಿಸಿದೆ. ಅತ್ಯಧಿಕ ಪ್ರಕರಣಗಳು ಕಂಡುಬಂದಿರುವೆಡೆ ರ್‍ಯಾಂಡಮ್ ಟೆಸ್ಟ್ ಸೇರಿದಂತೆ ಸಾಮೂಹಿವಾಗಿ ಜನರನ್ನು ಪರೀಕ್ಷೆಗೆ ಒಳಪಡಿಸಲಾಗುತ್ತಿದೆ. ಇಂತಹ ಸಂದರ್ಭದಲ್ಲಿ ಜನರಲ್ಲಿ ಆತಂಕ ಸೃಷ್ಟಿಸುವ ಹೇಳಿಕೆಗಳನ್ನು ನೀಡದಿರುವಂತೆ ಸಚಿವರುಗಳಿಗೆ ತಾಕೀತು ಮಾಡಲಾಗಿದೆ.

ಲಕ್ಷಾಂತರ ವಿದ್ಯಾರ್ಥಿಗಳು ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುತ್ತಿರುವ ಹೊತ್ತಿನಲ್ಲಿ ಇಂತಹ ಹೇಳಿಕೆ ನೀಡಿದ್ದರಿಂದ ಗೊಂದಲ ಸೃಷ್ಟಿಯಾಗಿದೆ. ಇಂತಹ ಸಂದರ್ಭದಲ್ಲಿ ಉತ್ಸಾಹ ತುಂಬುವುದನ್ನು ಬಿಟ್ಟು ನಕಾರಾತ್ಮಕ ಹೇಳಿಕೆ ನೀಡಿರುವುದು ಸರಿಯಲ್ಲ ಎಂದು ಯಡಿಯೂರಪ್ಪ ಸ್ಪಷ್ಟಪಡಿಸಿದ್ದಾರೆ.

### ಅಂಕಿ ಸಂಖ್ಯೆ

| | |
|---|---|
| 24 ಗಂಟೆಗಳಲ್ಲಿ ಸೋಂಕಿತರು | 442 |
| ಈವರೆಗಿನ ಒಟ್ಟು | 10,560 |
| ಮಂಗಳವಾರ ಮೃತಪಟ್ಟವರು | 06 |
| ಒಟ್ಟು ಮೃತಪಟ್ಟವರು | 170 |
| ಇಂದು ಆಸ್ಪತ್ರೆಯಿಂದ ಬಿಡುಗಡೆ | 519 |
| ಒಟ್ಟು ಗುಣಮುಖರಾಗಿ ಬಿಡುಗಡೆ | 6,670 |

### ದೇಶದಲ್ಲಿ

| | |
|---|---|
| ಸೋಂಕಿತರು | 4,73,105 |
| ಗುಣಮುಖ | 2,71,697 |
| ಮೃತರು | 14,894 |